**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದ ರಾಜು ರವರು ದಿನಾಂಕ:16.07.2024ರಂದು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಹೇಳಿಕೆ.**

ವಿಷಯ: ಕೋಲಾರ ಜಿಲ್ಲೆಯ ಅಂಗವಿಕಲರ ಕಲ್ಯಾಣ ಇಲಾಖೆ ವತಿಯಿಂದ ವಿಶೇಷ ಚೇತನರಿಗಾಗಿ ನೀಡಲಾಗುವ ದ್ವಿಚಕ್ರ ವಾಹನವು ಜಿಲ್ಲೆಗೆ ಬಂದು ತಿಂಗಳು ಕಳೆದರು ಹೊಸ ದ್ವಿಚಕ್ರ ವಾಹನಗಳು ಬಿಸಿಲು ಮಳೆ ಗಾಳಿಗೆ ದೂಳು ಹಿಡಿಯುತ್ತಿದೆ. ವಿಶೇಷಚೇತನರ ಓಡಾಟಕ್ಕೆ ಅನುಕೂಲವಾಗುವ ಉದ್ದೇಶದಿಂದ ಸರ್ಕಾರ ಅರ್ಹರಿಗೆ ದ್ವಿಚಕ್ರ ವಾಹನ ನೀಡುವ ಮೂಲಕ ಅವರನ್ನು ಪ್ರೋತ್ಸಾಹಿಸಲು ಉಚಿತ ದ್ವಿಚಕ್ರ ವಾಹನ ಯೋಜನೆಯನ್ನು ಸರ್ಕಾರ ಜಾರಿಗೊಳಿಸಿರುತ್ತದೆ. ಅರ್ಹ ವಿಶೇಷಚೇತನರಿಂದ ಸಲ್ಲಿಕೆಯಾಗುವಂತಹ ಅರ್ಜಿಗಳನ್ನು ಪರಿಶೀಲಿಸಿದ ಬಳಿಕ ಜಿಲ್ಲಾ ಮಟ್ಟದ ಸಿಇಓ ಅವರ ಅಧ್ಯಕ್ಷತೆಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುತ್ತದೆ. ಇಲ್ಲಿ ಆಯ್ಕೆ ಮಾಡಿದ ಪಟ್ಟಿಯನ್ನು ಸರಕಾರಕ್ಕೆ ಕಳುಹಿಸಲಾಗುತ್ತದೆ. ಸರಕಾರವು ನಾನಾ ಜಿಲ್ಲೆಗಳಿಂದ ಬಂದಂತಹ ಸಂಖ್ಯೆಗೆ ಅನುಗುಣವಾಗಿ ಟೆಂಡರ್ ಆಹ್ವಾನಿಸಿ ಆಯಾ ಜಿಲ್ಲೆಗಳಿಗೆ ನಿಗದಿಪಡಿಸಿದ ಗುರಿಯಂತೆ ವಾಹನಗಳನ್ನು ಪೂರೈಕೆ ಮಾಡಲಾಗುತ್ತದೆ. ಬಳಿಕ ಅರ್ಹ ಫಲಾನುಭವಿಗಳಿಗೆ ವಾಹನಗಳನ್ನು ನೀಡಲಾಗುತ್ತದೆ. ಇದರನ್ವಯ ಜಿಲ್ಲೆಯಲ್ಲಿ 86 ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ. ಕೇಂದ್ರ ಕಛೇರಿಯಿಂದ ಜಿಲ್ಲೆಗೆ 86 ದ್ವಿಚಕ್ರ ವಾಹನಗಳನ್ನು ಪೂರೈಕೆ ಮಾಡಲಾಗಿದ್ದು ನಗರದ ಹೊರವಲಯದ ಅಂತರಗಂಗೆ ಬುದ್ಧಿಮಾಂದ್ಯರ ಶಾಲೆಯಲ್ಲಿ ಇರಿಸಲಾಗಿದೆ. ಆದರೆ, ಯಾವುದೇ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳದ ಹಿನ್ನೆಲೆಯಲ್ಲಿ ದೂಳು ಹಿಡಿಯುತ್ತಿವೆ.

ಲೋಕಸಭೆ ಚುನಾವಣಾ ನೀತಿ ಸಂಹಿತೆ ಜಾರಿಯಾದ ಕಾರಣದಿಂದಾಗಿ ಫಲಾನುಭವಿಗಳಿಗೆ ವಾಹನ ವಿತರಣೆ ಮಾಡಿಲ್ಲ. ಆದರೆ, ನೀತಿ ಸಂಹಿತೆ ಮುಗಿದು ಒಂದು ತಿಂಗಳು ಕಳೆದಿದ್ದರೂ ಅಧಿಕಾರಿಗಳು ಮಾತ್ರ ಫಲಾನುಭವಿಗಳಿಗೆ ವಾಹನ ವಿತರಣೆ ಮಾಡಲು ಮುಂದಾಗಿಲ್ಲ. ವಾಹನಗಳನ್ನು ಬಯಲಿನಲ್ಲಿ ಇರಿಸಲಾಗಿದ್ದು, ಯಾವುದೇ ರೀತಿಯ ಸುರಕ್ಷತಾ ಕ್ರಮಗಳನ್ನು ಕೈಗೊಂಡಿಲ್ಲ. ಬಿಸಿಲು, ಮಳೆ ಗಾಳಿಗೆ ವಾಹನದ ಕಬ್ಬಿಣದ ಉತ್ಪನ್ನಗಳು ತುಕ್ಕು ಹಿಡಿಯುತ್ತಿದ್ದು, ಈ ನಡುವೆ ನೀತಿ ಸಂಹಿತೆ ಮುಗಿದು ತಿಂಗಳು ಕಳೆದರೂ ಪ್ರಾದೇಶಿಕ ಸಾರಿಗೆ ಕಛೇರಿಯಲ್ಲಿ ವಾಹನಗಳ ನೋಂದಣಿ ಮಾಡಿಸಲು ಸಾಧ್ಯವಾಗಿಲ್ಲ ಎಂಬ ಟೀಕೆಗಳು ವ್ಯಕ್ತವಾಗಿರುತ್ತದೆ:

## ಉತ್ತರ

ಕೋಲಾರ ಜಿಲ್ಲೆಗೆ 2023–24ನೇ ಸಾಲಿನಲ್ಲಿ 86 ಯಂತ್ರ ಚಾಲಿತ ದ್ವಿಚಕ್ರವಾಹನಗಳನ್ನು ಸರಬರಾಜು ಮಾಡಲಾಗಿದ್ದು, ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದ್ದ ಕಾರಣ, ವಿತರಣೆ ಮಾಡುವಲ್ಲಿ ವಿಳಂಬವಾಗಿರುತ್ತದೆ. ಮುಂದುವರೆದು ಶೀಘ್ರವಾಗಿ 86 ಯಂತ್ರಚಾಲಿತ ದ್ವಿಚಕ್ರವಾಹನಗಳನ್ನು ಈಗಾಗಲೇ ಆಯ್ಕೆಯಾಗಿರುವ ಅರ್ಹ ವಿಕಲಚೇತನರಿಗೆ ವಿತರಿಸಲು ಕ್ರಮ ವಹಿಸಲಾಗುವುದು.

ಸದರಿ 86 ಯಂತ್ರ ಚಾಲಿತ ದ್ವಿಚಕ್ರ ವಾಹನಗಳು ಯಾವುದೇ ರೀತಿ ತುಕ್ಕು ಹಿಡಿದಿರುವುದಿಲ್ಲ ಹಾಗೂ ವಾಹನಗಳ ಸುರಕ್ಷತಾ ದೃಷ್ಟಿಯಿಂದ ವಾಹನಗಳಿಗೆ ಸುರಕ್ಷತೆ ಕ್ರಮಗಳನ್ನು ಅನುಸರಿಸಿ, ಇಲಾಖಾ ಅನುದಾನದಡಿ ನಡೆಯುತ್ತಿರುವ ಅಂತರಗಂಗಾ ಸ್ವಯಂ ಸೇವಾ ಸಂಸ್ಥೆಯಿಂದ ನಡೆಸುತ್ತಿರುವ ಶಾಲೆಯ ಆವರಣದಲ್ಲಿ ಸುರಕ್ಷಿತವಾಗಿ ಸಿ.ಸಿ.ಟಿ.ವಿ ಕಣ್ಗಾವಲಿನಲ್ಲಿರಿಸಿ ಭದ್ರತೆ ಒದಗಿಸಲಾಗಿರುತ್ತದೆ. ಸರಬರಾಜು ಆದ ವಾಹನಗಳ ನೋಂದಣಿಗೆ ಯಾವುದೇ ತೊಂದರೆ ಉಂಟಾಗಿರುವುದಿಲ್ಲ.

**ಸಂಖ್ಯೆ: ಮಮಇ 162 ಪಿಹೆಚ್‌ಪಿ(ಇ) 2024**

(ಲಕ್ಷ್ಮೀ ಆರ್. ಹೆಬ್ಬಾಳ್ಕರ್)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ ಸಚಿವರು